# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ವ್ಯಾಪ್ತಿಯಲ್ಲಿರುವ ಹಚ್ಚಿನ್ಸ್ ಪಾರ್ಕ್‌ನಲ್ಲಿ ದಿನಾಂಕ: 22-07-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ಹಾಜರಿದ್ದ ಸದಸ್ಯರು,**

1. ಶ್ರೀ ನಾರಾಯಣಸ್ವಾಮಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ ಶ್ರೀಕಾಂತ್, ಸದಸ್ಯ ಕಾರ್ಯದರ್ಶಿಗಳು ಮತ್ತು ಸಂಚಾಲಕರು,

**ಹಾಜರಿದ್ದ ಅಧಿಕಾರಿ/ಸ್ಥಳೀಯರುಗಳು**

1. ಡಾ॥ ವಿನುತಾ, ವೈದ್ಯಾಧಿಕಾರಿಗಳು,
2. ಶ್ರೀ ಸಿ.ಎಂ. ವೆಂಕಟೇಶ್, ತೋಟಗಾರಿಕಾ ಇಲಾಖೆ
3. ಶ್ರೀ ನವೀನ್, ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ
4. ಶ್ರೀ ಕೆ.ಚಂದ್ರಶೇಖರ್, ಕಿರಿಯ ಅಭಿಯಂತರರು, ಬೆಸ್ಕಾಂ ಇಲಾಖೆ
5. ಶ್ರೀ ಚಕ್ರವರ್ತಿ, ಸ್ಥಳೀಯರು,
6. ಶ್ರೀ ಗಿರೀಶ್, ಸ್ಥಳೀಯರು,
7. ಶ್ರೀ ರಮೇಶ್, ಸ್ಥಳೀಯರು,
8. ಶ್ರೀ ನರಸಿಂಹ, ಸ್ಥಳೀಯರು,
9. ಶ್ರೀ ಎ.ಆರ್.ಸುರೇಶ್, ಸ್ಥಳೀಯರು,
10. ಶ್ರೀ ಕಿಶೋರ್.ಇ.ಎಸ್, ಕಿರಿಯ ಆರೋಗ್ಯ ಪರಿವೀಕ್ಷಕರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

1) ಮಾರುತಿಸೇವಾನಗರ ವಾರ್ಡ್ ವ್ಯಾಪ್ತಿಯ ಎಸ್.ಕುಮಾರ್ ಲೇಔಟ್ ನಲ್ಲಿ ಪ್ರತಿ ನಿತ್ಯ 24/7 ವಿದ್ಯುತ್ ದೀಪಗಳು ಉರಿಯುತ್ತಿದ್ದು, ಇದರಿಂದ ಸಾಕಷ್ಟು ವಿದ್ಯುತ್ ಪೋಲಾಗುತ್ತಿದ್ದು, ಇದನ್ನು ತಪ್ಪಿಸಲು ಅವಶ್ಯವಿರುವ ಸ್ಥಳಗಳಲ್ಲಿ ವಿದ್ಯುತ್ ಸ್ವಿಚ್‌ಗಳನ್ನು ಅಳವಡಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಬಿಬಿಎಂಪಿ ವಿದ್ಯುತ್ ಇಲಾಖೆಯ ಅಧಿಕಾರಿಗಳಿಗೆ ಈ ಬಗ್ಗೆ ಕೂಡಲೇ ಕ್ರಮ ವಹಿಸಲು ಸೂಚಿಸಲಾಯಿತು.

2) ವಾರ್ಡ್ ವ್ಯಾಪ್ತಿಯ ಬಾಣಸವಾಡಿ ಮುಖ್ಯರಸ್ತೆ ಹಾಗೂ ಇತರೆ ರಸ್ತೆಗಳಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ನಿಗಮ ಇಲಾಖೆ ವತಿಯಿಂದ ಅನೇಕ ಕಡೆಗಳಲ್ಲಿ ಪೈಪ್‌ಲೈನ್ ಅಳವಡಿಸಲು ರಸ್ತೆಯನ್ನು ಅಗೆದು ಗುಂಡಿಗಳು ಬಿದ್ದಿದ್ದು, ಸದರಿ ಸ್ಥಳದಲ್ಲಿ ಸರಿಯಾಗಿ ರಸ್ತೆಯ ಗುಂಡಿಗಳನ್ನು ಮುಚ್ಚದೇ ಇರುವುದರಿಂದ ಸಾರ್ವಜನಿಕರ ಸಂಚಾರಕ್ಕೆ ಅಡಚಣೆ ಉಂಟಾಗುತ್ತಿರುವುದರಿಂದ ಅಂತಹ ಸ್ಥಳಗಳಲ್ಲಿ ಕೂಡಲೇ ಗುಂಡಿಗಳನ್ನು ಸರಿಯಾಗಿ ಮುಚ್ಚಲು ಕ್ರಮ ವಹಿಸಲು ಸಭೆಯಲ್ಲಿ ಸೂಚಿಸಿದರು.

3) ವಾರ್ಡ್ ವ್ಯಾಪ್ತಿಯ ಜೂಡ್ ಶಾಲೆ ಆವರಣದಲ್ಲಿ ಹಾಗೂ ನಾಗಯ್ಯನಪಾಳ್ಯ ಪ್ರದೇಶದಲ್ಲಿ ಕಸ ಹಾಗೂ ಇತರೆ ಘನತ್ಯಾಜ್ಯ ಬಿದ್ದಿದ್ದು, ಸಾರ್ವಜನಿಕರ ಆರೋಗ್ಯ ಹಿತದೃಷ್ಟಿಯಿಂದ ಕೂಡಲೇ ಸದರಿ ಪ್ರದೇಶದಲ್ಲಿ ಬಿದ್ದಿರುವ ಕಸ ಹಾಗೂ ಇತರೆ ಘನತ್ಯಾಜ್ಯವನ್ನು ತೆರವುಗೊಳಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಜೂಡ್ ಶಾಲೆ ಆವರಣದಲ್ಲಿ ಹಾಗೂ ನಾಗಯ್ಯನಪಾಳ್ಯ ಪ್ರದೇಶದಲ್ಲಿ ಬಿದ್ದಿರುವ ತ್ಯಾಜ್ಯವನ್ನು ಕೂಡಲೇ ತೆರವುಗೊಳಿಸಲು ಕ್ರಮ ವಹಿಸಲು ಸಭೆಯಲ್ಲಿ ಹಾಜರಿದ್ದ ಘನತ್ಯಾಜ್ಯ ನಿರ್ವಹಣೆ ವಿಭಾಗದ ಸಿಬ್ಬಂದಿಯವರಿಗೆ ತಿಳಿಸಿದರು.

4) ವಾರ್ಡ್ ವ್ಯಾಪ್ತಿಯಲ್ಲಿ ಅನೇಕ ಕಡೆಗಳಲ್ಲಿ ವಿದ್ಯುತ್ ಕಂಬ ಹಾಗೂ ಇತರೆ ಪೋಲ್‌ಗಳಿಗೆ ಅನಧಿಕೃತವಾಗಿ ಕೇಬಲ್‌ಗಳನ್ನು ನೇತು ಹಾಕಿದ್ದು, ಈ ಕೇಬಲ್‌ಗಳು ಹರಿದು ಬಿದ್ದು ಯಾವುದೇ ಸಂದರ್ಭದಲ್ಲಿ ಅನಾಹುತ ಸಂಭವಿಸುವ ಸಾಧ್ಯತೆ ಇರುವುದರಿಂದ, ಅಂತಹ ಕೇಬಲ್‌ಗಳನ್ನು ಕೂಡಲೇ ತೆರವುಗೊಳಿಸಲು ಕ್ರಮ ವಹಿಸಲು ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿ ಅನಧಿಕೃತವಾಗಿ ಅಳವಡಿಸಿರುವ ಓವರ್ ಹೆಡ್ ಕೇಬಲ್‌ಗಳನ್ನು ಕೂಡಲೇ ತೆರವುಗೊಳಿಸಲು ಕ್ರಮ ವಹಿಸಲು ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರಿಗೆ ತಿಳಿಸಿದರು.

5) ವಾರ್ಡ್ ವ್ಯಾಪ್ತಿಯಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ನಿಗಮ ವತಿಯಿಂದ ಕುಡಿಯುವ ನೀರಿನ ಸರಬರಾಜು ಮಾಡುತ್ತಿದ್ದು, ಅತೀ ನಿಧಾನವಾಗಿ ನೀರು ಬರುತ್ತಿದ್ದು, ಇದರಿಂದ ಕೆಲಸ ಕಾರ್ಯಗಳನ್ನು ಬದಿಗಿಟ್ಟು ಬರೀ ನೀರು ತುಂಬಿಸುವ ಕೆಲಸ ಮಾಡಬೇಕಾಗಿರುತ್ತದೆ. ಈ ಬಗ್ಗೆ ಕೂಡಲೇ ಕ್ರಮ ವಹಿಸಿ, ನೀರು ಸರಬರಾಜನ್ನು ತೀವ್ರಗೊಳಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಬಿಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ಮಾತನಾಡಿ ಈ ಬಗ್ಗೆ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

6) ವಾರ್ಡ್ ವ್ಯಾಪ್ತಿಯ ಅನೇಕ ಪ್ರದೇಶಗಳಲ್ಲಿ ಇತ್ತೀಚೆಗೆ ಅನೈತಿಕ ಚಟುವಟಿಕೆಗಳು ಹಾಗೂ ಸರಗಳ್ಳತನ ಹೆಚ್ಚಾಗುತ್ತಿರುವುದು ಕಂಡುಬಂದಿದ್ದು, ಇದನ್ನು ಪೊಲೀಸ್ ಇಲಾಖೆಯ ಗಮನಕ್ಕೆ ತರಲಾಗಿದ್ದು, ಅಂತಹ ಪ್ರದೇಶದಲ್ಲಿ ಪೋಲೀಸ್ ಗಸ್ತು ಹಾಗೂ ಅಂತಹ ಸ್ಥಳಗಳನ್ನು ಗುರುತಿಸಿ ಸಿಸಿ ಟಿವಿ ಕ್ಯಾಮೆರಾಗಳನ್ನು ಅಳವಡಿಸಿ, ಅಂತಹ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು ರವರು ಈಗಾಗಲೇ ಅಂತಹ ಸ್ಥಳಗಳನ್ನು ಗುರುತಿಸಲಾಗಿದ್ದು, ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸುವ ಕಾಮಗಾರಿಯನ್ನು ಅತೀ ಶೀಘ್ರವಾಗಿ ಪ್ರಾರಂಭಿಸಲಾಗುವುದೆಂದು ಹಾಗೂ ಅಂತಹ ಸ್ಥಳಗಳಲ್ಲಿ ರಾತ್ರಿ ಹಾಗೂ ಮುಂಜಾವಿನ ಸಮಯದಲ್ಲಿ ಪೊಲೀಸ್ ಗಸ್ತನ್ನು ಹೆಚ್ಚಿಸಲು ಪೊಲೀಸ್ ಇಲಾಖೆಗೆ ತಿಳಿಸಲಾಗುವುದೆಂದು ಸಭೆಗೆ ತಿಳಿಸಿದರು.

7) ವಾರ್ಡ್ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಕೋವಿಡ್ ಸೋಂಕು ನಿಯಂತ್ರಣ ಹಾಗೂ ಲಸಿಕಾ ಕಾರ್ಯ ಕ್ರಮವನ್ನು ಯಶಸ್ವಿಯಾಗಿ ಕಾರ್ಯಗತ ಮಾಡುತ್ತಿರುವ ಬಗ್ಗೆ ಶ್ಲಾಘಿಸಿದರು ಹಾಗೂ ಇನ್ನೂ ಹೆಚ್ಚಿನ ಲಸಿಕಾ ಅಭಿಯಾನವನ್ನು ಮಾಡಿ, ವಾರ್ಡಿನಲ್ಲಿ ಕೋವಿಡ್ ಮುಕ್ತ ವಾರ್ಡಾಗಿ ಮಾಡಲು ಮಾನ್ಯ ಅಧ್ಯಕ್ಷರು ವೈದ್ಯಾಧಿಕಾರಿಗಳಿಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ವಿಷಯಗಳ ಬಗ್ಗೆ ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

<u>ಪ್ರತಿಯನ್ನು</u>

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ/ಕಛೇರಿ ಕಡತಕ್ಕೆ.